**"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"**

# ಕರ್ನಾಟಕ ವಿಧಾನ ಪರಿಷತ್ತು

16ನೇ ಜುಲೈ 2019
ಮಂಗಳವಾರ

## ವಿಷಯಾನುಕ್ರಮಣಿಕೆ

1. **ಬಹುಮತ ಕಳೆದುಕೊಂಡಿರುವ ಸರಕಾರಕ್ಕೆ ಸದನ ನಡೆಸುವ ನೈತಿಕತೆ ಇಲ್ಲ ಎಂದು ವಿರೋಧ ಪಕ್ಷದವರಿಂದ ಪ್ರತಿಭಟನೆ ಹಾಗೂ ಧರಣಿ.**

ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು)
ಶ್ರೀ ಐವನ್ ಡಿ'ಸೋಜಾ
ಶ್ರೀ ಡಿ.ಕೆ.ಶಿವಕುಮಾರ್(ಜಲಸಂಪನ್ಮೂಲ ಸಚಿವರು)
ಶ್ರೀ ಸಾ.ರಾ.ಮಹೇಶ್(ಪ್ರವಾಸೋದ್ಯಮ ಸಚಿವರು)
ಶ್ರೀ ಎಸ್.ಎಲ್.ಭೋಜೇಗೌಡ
ಡಾ:ಜಯಮಾಲ(ಸಭಾನಾಯಕರು)
ಶ್ರೀ ಕೆ.ಟಿ.ಶ್ರೀಕಂಠೇಗೌಡ

2. **ಸಭೆಯ ಮುಂದಿಡಲಾದ ಕಾಗದಪತ್ರಗಳು**

3. **ವರದಿಗಳನ್ನೊಪ್ಪಿಸುವುದು**

4. **ಪ್ರಶ್ನೋತ್ತರಗಳು**

**ಅ) ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಮೌಖಿಕವಾಗಿ ನೀಡಲಾದ ಉತ್ತರಗಳು.**

259- ಟಿ.ನರಸೀಪುರದಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣದ ಕುರಿತು
-ಶ್ರೀ ಆರ್.ಧರ್ಮಸೇನ

127- ರಾಯಚೂರು ನಗರ OPEC ಆಸ್ಪತ್ರೆಯನ್ನು ಸ್ವಾಯತ್ತ ಸಂಸ್ಥೆಯನ್ನಾಗಿ ಪರಿವರ್ತಿಸುವ ಬಗ್ಗೆ -ಶ್ರೀ ಬಸವರಾಜ ಪಾಟೀಲ್ ಇಟಗಿ

149- ತುಂಗಭದ್ರಾ ಜಲಾಶಯಕ್ಕೆ ಸಮಾನಾಂತರ ಜಲಾಶಯ ನಿರ್ಮಾಣದ ಪ್ರಸ್ತಾವನೆ ಕುರಿತು - ಶ್ರೀ ಕೆ.ಸಿ.ಕೊಂಡಯ್ಯ

**ಆ) ಚುಕ್ಕೆ ಗುರುತಿನ ಮತ್ತು ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು**

~*~~*~~*~~*~

"ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/**unedited copy**, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(089)16-07-2019/12-10/bkp-bns

**ಕರ್ನಾಟಕ ವಿಧಾನ ಪರಿಷತ್ತು**

**ಮಂಗಳವಾರ, 16ನೇ ಜುಲೈ 2019**

**ಸದನವು ವಿಧಾನಸೌಧದಲ್ಲಿರುವ ವಿಧಾನ ಪರಿಷತ್ತಿನ ಸಭಾಂಗಣದಲ್ಲಿ**

**ಮಧ್ಯಾಹ್ನ 12 ಗಂಟೆ 15 ನಿಮಿಷಕ್ಕೆ ಸಮಾವೇಶಗೊಂಡಿತು.**

**ಉಪ ಸಭಾಪತಿ(ಶ್ರೀ ಎಸ್.ಎಲ್. ಧರ್ಮೇಗೌಡ) ಅವರು**

**ಪೀಠದಲ್ಲಿ ಉಪಸ್ಥಿತರಿದ್ದರು**

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

1. **ಬಹುಮತ ಕಳೆದುಕೊಂಡಿರುವ ಸರಕಾರಕ್ಕೆ ಸದನ ನಡೆಸುವ ನೈತಿಕತೆ ಇಲ್ಲ ಎಂದು ವಿರೋಧ ಪಕ್ಷದವರಿಂದ ಪ್ರತಿಭಟನೆ ಹಾಗೂ ಧರಣಿ**

**(ಸದನವು ಪ್ರಾರಂಭವಾದಾಗ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ ಭಾರತೀಯ ಜನತಾ ಪಕ್ಷದ ಸದಸ್ಯರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು)**

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರು ದಯಮಾಡಿ ಕಾರ್ಯಕಲಾಪ ನಡೆಯುವುದಕ್ಕೆ ಅವಕಾಶ ಮಾಡಿಕೊಡಬೇಕು. ತಾವು ತಮ್ಮ ಸ್ಥಾನಕ್ಕೆ ಬರಬೇಕು.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, . . .

**ಶ್ರೀ ಕೆ.ಟಿ.ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ರಾಜ್ಯದಲ್ಲಿರುವ ಜ್ವಲಂತ ಸಮಸ್ಯೆಗಳ ಬಗ್ಗೆ ಸದನದಲ್ಲಿ ಚರ್ಚೆಯಾಗಬೇಕು.

(ಗೊಂದಲ)

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರುಗಳು ಸರ್ಕಾರದ ವಿರುದ್ಧವಾಗಿ "ಬಹುಮತವಿಲ್ಲದ ಸರ್ಕಾರಕ್ಕೆ ಧಿಕ್ಕಾರ, ಧಿಕ್ಕಾರ" ಮತ್ತು "ಮುಖ್ಯಮಂತ್ರಿಗಳೇ ರಾಜಿನಾಮೆ ಕೊಡಿ" ಇತ್ಯಾದಿಯಾಗಿ ಫಲಕಗಳನ್ನು ಪ್ರದರ್ಶಿಸಿದರೆ ಆಡಳಿತ ಪಕ್ಷದ ಸದಸ್ಯರುಗಳು "ಬಿಜೆಪಿ ಪಕ್ಷದ ವಿರುದ್ಧವಾಗಿ ಶಾಸಕರನ್ನು ಖರೀದಿಸುತ್ತಿರುವ ಬಿಜೆಪಿ.ಗೆ ಧಿಕ್ಕಾರ, ಧಿಕ್ಕಾರ" ಇತ್ಯಾದಿಯಾಗಿ ಫಲಕಗಳನ್ನು ಪ್ರದರ್ಶಿಸಿದರು)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೇ, ನಿನ್ನೆ ನಾವು ಸರ್ಕಾರಕ್ಕೆ ಏನು ಹೇಳಿದ್ದೆವು ಎಂದರೆ, ಈ ಒಂದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಇತಿಹಾಸವನ್ನು ತೆಗೆದು ನೋಡಿದರೆ ಎಲ್ಲವೂ ಗೊತ್ತಾಗುತ್ತದೆ. ಶ್ರೀಮಾನ್ ಕೆ.ಸಿ.ರೆಡ್ಡಿಯವರಿಂದ ಪ್ರಾರಂಭವಾಗಿ ಶ್ರೀಯುತ ಸಿದ್ದರಾಮಯ್ಯನವರವರೆಗೂ ಬಹುಮತ ಇಲ್ಲದೇ ಇರುವಂತಹ ಯಾವುದೇ ಸರ್ಕಾರ ಆಡಳಿತ ನಡೆಸಲಿಕ್ಕೆ ಆಗಿರುವುದಿಲ್ಲ. ನೀವು ಇದರ ಬಗ್ಗೆ ಯೋಚನೆ ಮಾಡಬೇಕು. ಪ್ರಜಾಪ್ರಭುತ್ವದ ಮೂಲ ತಳಹದಿ ಇರುವುದೇ ಸರ್ಕಾರಕ್ಕೆ ಇರುವ ಬಹುಮತ. ಸರ್ಕಾರಕ್ಕೆ ಬಹುಮತ ಇಲ್ಲ ಎನ್ನುವುದು ಸ್ಪಷ್ಟವಾಗಿ ಸರ್ಕಾರಕ್ಕೆ ಅರ್ಥವಾಗಿದೆ. ಆ ಹಿನ್ನೆಲೆಯಲ್ಲಿ ನಾನು ಹೇಳುತ್ತಿದ್ದೇನೆ. ದಯವಿಟ್ಟು ಎಲ್ಲರೂ ನಾನು ಹೇಳುವುದನ್ನು ಕೇಳಬೇಕು.

(ಗೊಂದಲ)

ಶ್ರೀಮಾನ್ ರಾಮಕೃಷ್ಣ ಹೆಗಡೆಯವರು ಮುಖ್ಯಮಂತ್ರಿಗಳಾಗಿದ್ದಂತಹ ಸಂದರ್ಭದಲ್ಲಿ ಬಹುಮತ ಇಲ್ಲವೆಂದು ಹೇಳಿ ರಾಜಿನಾಮೆಯನ್ನು ಕೊಟ್ಟಿದ್ದರು. ಶ್ರೀಮಾನ್ ದೇವರಾಜ ಅರಸ್ ರವರು ಸಹ ಈ

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ರಾಜ್ಯದ ಮುಖ್ಯಮಂತ್ರಿಗಳಾಗಿದ್ದರು. ಆ ಸಮಯದಲ್ಲಿ ಬಹಮತ ಇಲ್ಲವೆಂದು ಹೇಳಿ ತಮ್ಮ ಕುರ್ಚಿಯನ್ನು ಬಿಟ್ಟು ಹೋಗಿದ್ದರು. ಆದ್ದರಿಂದ, ನಾನು ಹೇಳುವುದು ಏನೆಂದರೆ, ಶ್ರೀಮಾನ್.ಕೆ.ಸಿ.ರೆಡ್ಡಿಯವರಿಂದ ಆರಂಭವಾಗಿ ಶ್ರೀಯುತ ಸಿದ್ದರಾಮಯ್ಯನವರವರೆವಿಗೆ ಬಹುಮತ ಇಲ್ಲದೆ ಯಾವುದೇ ಮುಖ್ಯಮಂತ್ರಿ ಕರ್ನಾಟಕವನ್ನು ಆಳಿದಂತಹ ಉದಾಹರಣೆ ಇಲ್ಲ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ರಾಜಿನಾಮೆಯನ್ನು ಕೊಡಬೇಕೆಂದು ಹೇಳುತ್ತಿದ್ದೇನೆ.

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೇ, ಮಾನ್ಯ ವಿರೋಧ ಪಕ್ಷದ ನಾಯಕರ ಭಾಷಣ ಸಾಕು.

(ಗೊಂದಲ)

**ಶ್ರೀ ಡಿ.ಕೆ.ಶಿವಕುಮಾರ್(ಜಲಸಂಪನ್ಮೂಲ ಸಚಿವರು):-** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದವರು ಏನೇನು ಹೇಳಬೇಕೋ ಹೇಳಲಿ. ಅದಕ್ಕೆ ನಮ್ಮ ಅಭ್ಯಂತರ ಏನೂ ಇರುವುದಿಲ್ಲ. ಅವರಿಗೆ ಬೇಡವಾದರೆ ಸದನವನ್ನು adjourn ಮಾಡಿಸಿಕೊಳ್ಳುತ್ತಾರೆ. We will run the Government.

(ಗೊಂದಲ)

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ಬೇಗ ಮುಗಿಸಬೇಕು.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೇ, ಆಡಳಿತ ನಡೆಸಲಿಕ್ಕೆ ಬಹುಮತ ಇಲ್ಲದಂತಹ ಸರ್ಕಾರದ ಜೊತೆಯಲ್ಲಿ ನಾನು ಏನು ಚರ್ಚೆ ಮಾಡಲಿ? ಆಡಳಿತ ನಡೆಸಲಿಕ್ಕೆ ಬಹುಮತ ಇಲ್ಲದಂತಹ ಸರ್ಕಾರದಲ್ಲಿ ಶ್ರೀಯುತ ಡಿ.ಕೆ.ಶಿವಕುಮಾರ್‌ರವರು ಸೇರಿದಂತೆ ಎಲ್ಲಾ ಸಚಿವರು ರಾಜಿನಾಮೆ ಕೊಟ್ಟಿದ್ದಾರೆ. ಅದಕ್ಕೆ ಅವರದ್ದೇ ಆದಂತಹ ಆಂತರಿಕ ಕಾರಣಗಳಿರಬಹುದು. ಅಧಿಕೃತವಾಗಿ ಮುಖ್ಯಮಂತ್ರಿಗಳನ್ನು ಹೊರತುಪಡಿಸಿ ಬೇರೆ ಯಾವುದೇ ಮಂತ್ರಿಗಳು ಇಲ್ಲದಂತಹ ಪರಿಸ್ಥಿತಿ ಇದೆ. ನನಗೆ ಅನಿಸಿದಂತೆ ಸರ್ಕಾರ ಎಲ್ಲಿದೆ? ಈ ವಿಚಾರವಾಗಿ ಶ್ರೀಯುತ ಡಿ.ಕೆ.ಶಿವಕುಮಾರ್‌ರವರು ಸರ್ಕಾರ ಎಲ್ಲಿದೆ ಎಂದು ಹೇಳಬೇಕು.

**ಶ್ರೀ ಡಿ.ಕೆ.ಶಿವಕುಮಾರ್:-** ಮಾನ್ಯ ಸಭಾಪತಿಯವರೇ, ಸರ್ಕಾರ ಇಲ್ಲಿದೆ. ಸರ್ಕಾರವಾಗಿ ನಾನು ಇಲ್ಲಿ ಕುಳಿತಿದ್ದೇನೆ. I am the Government.

(ಗೊಂದಲ)

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೇ, ಯಾವ ಮಂತ್ರಿಗಳು ಕೆಲಸ ಮಾಡುತ್ತಿದ್ದಾರೆಂದು ಹೇಳಬೇಕು.

**ಶ್ರೀ ಸಾ.ರಾ.ಮಹೇಶ್(ಪ್ರವಾಸೋಧ್ಯಮ ಸಚಿವರು):-** ಮಾನ್ಯ ಸಭಾಪತಿಯವರೇ, ಸಚಿವರಾಗಿ ನಾವು ಸದನದಲ್ಲಿ ಕುಳಿತಿರುವುದು ಇವರುಗಳ ಕಣ್ಣಿಗೆ ಕಾಣುತ್ತಿಲ್ಲವೇ?

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೇ, ಇವರಿಗೆ ಸರ್ಕಾರ ಕಾಣುತ್ತಿಲ್ಲವೇ? ಸರ್ಕಾರ ಇರುವುದರಿಂದಲೇ ಸದನ ನಡೆಯುತ್ತಿದೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೇ, ಕೂಗಳತೆಯ ದೂರದಲ್ಲಿ ಅಂದರೆ ಮಂಡ್ಯ ಜಿಲ್ಲೆಯ ಅರಕೆರೆ ಶಾಲೆಯಲ್ಲಿ ವಿಷಪ್ರಾಶನ ಮಾಡಿದ ಮಕ್ಕಳ ನೆರವಿಗೆ ಆರೋಗ್ಯ ಸಚಿವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಅಥವಾ ಗೃಹ ಸಚಿವರು ಬಂದಿದ್ದಾರೆಯೇ? ಇಂತಹ ಪರಿಸ್ಥಿತಿಯಲ್ಲಿ ಸರ್ಕಾರ ಜೀವಂತವಾಗಿರದೆ ಶವ ಪರಿಸ್ಥಿತಿಯಲ್ಲಿದೆ. ಆ ಕಾರಣಕ್ಕೋಸ್ಕರ ಬಹುಮತ ಇಲ್ಲದಂತಹ ಸರ್ಕಾರ ಒಂದು ನಿಮಿಷವೂ ಸಹ ಅಧಿಕಾರದಲ್ಲಿ ಇರಲಿಕ್ಕೆ ಸಾಧ್ಯವಿಲ್ಲ.

(ಗೊಂದಲ)

**(ಮುಂದುವರೆದಿದೆ...**

**(90) 16.07.2019:12:20:ಎಸ್‌ವಿ-ಬಿಎನ್‌ಎಸ್**

**(ಗೊಂದಲ)**

**(ಈ ಹಂತದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರು ಸದನದ ಬಾವಿಗೆ ಬಂದು ಧರಣಿ ನಿರತರಾದರು)**

**ಡಾ:ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೇ, ಸರ್ಕಾರವನ್ನು ಅತಂತ್ರಗೊಳಿಸಬೇಕೆಂದು ನಮ್ಮ ಎದುರಿಗೆ ನಿಂತುಕೊಂಡು ಸರ್ಕಾರವನ್ನು ನಡೆಸುವುದಕ್ಕೆ ಆಗುತ್ತಿಲ್ಲ ಎಂಬ ಮಾತನ್ನು ಹೇಳುತ್ತಿದ್ದಾರೆ. ನಾವು ಸರ್ಕಾರವನ್ನು ನಡೆಸುತ್ತಿದ್ದೇವೆ. ಪ್ರಶ್ನೋತ್ತರ ವೇಳೆಯನ್ನು ನಡೆಸಲು ಅವಕಾಶವನ್ನು ಮಾಡಿಕೊಡಬೇಕು. ಇಂದಿನ ಪ್ರಶ್ನೆಗಳಿಗೆ ಸರ್ಕಾರವು ಉತ್ತರಗಳನ್ನು ಕೊಟ್ಟಿದ್ದರೂ

"ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ವಿರೋಧ ಪಕ್ಷದವರಿಗೆ ಅದು ಸಹ್ಯವಾಗುತ್ತಿಲ್ಲ. ಯಾವ ಕಾರಣಕ್ಕೂ ಈ ರೀತಿಯ ಗೊಂದಲಕ್ಕೆ ಅವಕಾಶವನ್ನು ನೀಡದೆ ಪ್ರಶ್ನೋತ್ತರ ಕಲಾಪವನ್ನು ನಡೆಸಬೇಕೆಂದು ಕೋರುತ್ತೇನೆ.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ವಿರೋಧ ಪಕ್ಷದ ಸದಸ್ಯರುಗಳು 'ಬಹುಮತ ಇಲ್ಲದ ಸಮ್ಮಿಶ್ರ ಸರ್ಕಾರಕ್ಕೆ ಧಿಕ್ಕಾರ' ಎಂಬ ಘೋಷಣೆಗಳನ್ನು ಕೂಗಿದರು)**

**(ಅದೇ ವೇಳೆಯಲ್ಲಿ ಆಡಳಿತ ಪಕ್ಷದ ಸದಸ್ಯರು 'ಧಿಕ್ಕಾರ ಧಿಕ್ಕಾರ ಬಿಜೆಪಿಗೆ ಧಿಕ್ಕಾರ' ಹಾಗೂ 'ಪ್ರಜಾಪ್ರಭುತ್ವವನ್ನು ಕೊಲೆ ಮಾಡಿದ ಬಿ.ಜೆ.ಪಿ. ಪಕ್ಷಕ್ಕೆ ಧಿಕ್ಕಾರ' ಎಂಬ ಘೋಷಣೆಗಳನ್ನು ಕೂಗುತ್ತಿದ್ದರು)**

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ದಯಮಾಡಿ ಸದನದ ಬಾವಿಯಿಂದ ಹೊರಬನ್ನಿ.

**(ಗೊಂದಲ)**

**(ಈ ಹಂತದಲ್ಲಿ ಆಡಳಿತ ಪಕ್ಷದ ಸದಸ್ಯರು 'ನಿಲ್ಲಿಸಿ-ನಿಲ್ಲಿಸಿ, ಕುದುರೆ ವ್ಯಾಪಾರ ನಿಲ್ಲಿಸಿ' ಎಂದು ಘೋಷಣೆಗಳನ್ನು ಕೂಗಿದರು)**

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೇ, ಸದನದಲ್ಲಿ ಹಲವಾರು ದಿನಗಳಿಂದ ಪ್ರಶ್ನೋತ್ತರ ಕಲಾಪ ನಡೆದಿರುವುದಿಲ್ಲ. ಆದ್ದರಿಂದ ದಯಮಾಡಿ ಪ್ರಶ್ನೋತ್ತರ ಕಲಾಪವನ್ನು ನಡೆಸಬೇಕು.

**ಶ್ರೀ ಸಾ.ರಾ.ಮಹೇಶ್:-** ಮಾನ್ಯ ಸಭಾಪತಿಯವರೇ, ಬಹುಮತ ಸಾಬೀತು ಪಡಿಸುವುದಕ್ಕಾಗಿಯೇ ದಿನಾಂಕವನ್ನು ನಿಗದಿ ಪಡಿಸಲಾಗಿದೆ. ಬೀದಿ ಬೀದಿಯಲ್ಲೆಲ್ಲಾ ಬಹುಮತವನ್ನು ಸಾಬೀತು ಪಡಿಸುವುದಕ್ಕಾಗುವುದಿಲ್ಲ. ಇದನ್ನು ವಿರೋಧ ಪಕ್ಷದಲ್ಲಿ ಕುಳಿತಿರುವವರು ದಯಮಾಡಿ ಅರ್ಥ ಮಾಡಿಕೊಳ್ಳಬೇಕು. ಗುರುವಾರದಂದು ಬಹುಮತವನ್ನು ಸಾಬೀತು ಮಾಡಲಾಗುತ್ತದೆ.

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ತಮ್ಮ ಸದಸ್ಯರಿಗೆ ಬಾವಿಯಿಂದ ಹೊರಬರುವುದಕ್ಕೆ ಹೇಳಿ.

**(ಗೊಂದಲ)**

ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು

"ತಿದ್ದುಪಡಿಯಾಗದ ಪ್ರತಿ/**unedited copy**, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ತಮ್ಮ ಸ್ಥಾನದಿಂದ):–** ಮಾನ್ಯ ಸಭಾಪತಿಯವರೇ, ಇಲ್ಲಿ ಯಾವುದೇ ಕುದುರೆ ವ್ಯಾಪಾರ ನಡೆದಿಲ್ಲ. ಸಮ್ಮಿಶ್ರ ಸರ್ಕಾರಕ್ಕೆ ಬಹುಮತ ಇಲ್ಲ.

**ಶ್ರೀ ಐವನ್ ಡಿ'ಸೋಜ:–** ಮಾನ್ಯ ಸಭಾಪತಿಯವರೇ, ರೂ.50 ಕೋಟಿ, ರೂ.25 ಕೋಟಿ ಎಲ್ಲಿಂದ ಬಂತು?

**(ಗೊಂದಲ)**

**ಡಾ:ಜಯಮಾಲ:–** ಮಾನ್ಯ ಸಭಾಪತಿಯವರೇ, ತಾವು ಯಾವುದಾದರೊಂದು ನಿರ್ಧಾರವನ್ನು ಮಾಡಬೇಕಾಗುತ್ತದೆ. ವಿರೋಧ ಪಕ್ಷದವರು ಅನವಶ್ಯಕವಾಗಿ ಇಂದು ಇಂತಹ ಪರಿಸ್ಥಿತಿಯೊಂದನ್ನು ತಂದೊಡ್ಡಿದ್ದಾರೆ. ಮಾನ್ಯ ಮುಖ್ಯಮಂತ್ರಿಯವರು ವಿಶ್ವಾಸಮತವನ್ನು ಯಾಚಿಸುವುದಾಗಿ ಹೇಳಿದ್ದಾರೆ. ಖಂಡಿತವಾಗಿಯೂ ಈ ಸರ್ಕಾರ ವಿಶ್ವಾಸಮತವನ್ನು ಗೆದ್ದೇ ಗೆಲ್ಲುತ್ತದೆ.

**(ಗೊಂದಲ)**

**ಉಪ ಸಭಾಪತಿಯವರು:–** ಮಾನ್ಯ ವಿರೋಧ ಪಕ್ಷದ ಸದಸ್ಯರು ಸದನದ ಬಾವಿಯಿಂದ ಹೊರಬನ್ನಿ. ನಂತರ ನಾನು ತಮಗೆ ಅವಕಾಶ ಮಾಡಿಕೊಡುತ್ತೇನೆ.

**(ಈ ಹಂತದಲ್ಲಿ ಬಾವಿಯೊಳಗಿದ್ದ ವಿರೋಧ ಪಕ್ಷದ ಸದಸ್ಯರು 'ಕೊಡಿ–ಕೊಡಿ, ರಾಜೀನಾಮೆ ಕೊಡಿ' ಎಂದು ಘೋಷಣೆಗಳನ್ನು ಕೂಗಿದರು)**

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ತಮ್ಮ ಸ್ಥಾನದಿಂದ ಕಪ್ಪುಪಟ್ಟಿಯುಳ್ಳ ಫಲಕವನ್ನು ಪ್ರದರ್ಶಿಸುತ್ತಾ):–** ಮಾನ್ಯ ಸಭಾಪತಿಯವರೇ, ಶಾಸಕರನ್ನು ಖರೀದಿ ಮಾಡುತ್ತಿರುವವರಿಗೆ ಧಿಕ್ಕಾರ. ತಾವು ಅಧಿವೇಶನವನ್ನು ನಡೆಸಬೇಕು. ವಿರೋಧ ಪಕ್ಷದ ಸದಸ್ಯರನ್ನು ಸದನದ ಕಲಾಪದಿಂದ ಅಮಾನತುಗೊಳಿಸಿ.

**(ಗೊಂದಲ)**

**(ಈ ಹಂತದಲ್ಲಿ ಮತ್ತೊಮ್ಮೆ ಆಡಳಿತ ಪಕ್ಷದ ಸದಸ್ಯರು 'ನಿಲ್ಲಿಸಿ–ನಿಲ್ಲಿಸಿ, ಕುದುರೆ ವ್ಯಾಪಾರ ನಿಲ್ಲಿಸಿ', 'ಕುದುರೆ ವ್ಯಾಪಾರ ಮಾಡುತ್ತಿರುವ ಬಿಜೆಪಿಗೆ ಧಿಕ್ಕಾರ' ಎಂಬ ಘೋಷಣೆಗಳನ್ನು ಕೂಗಿದರು)**

**ಉಪ ಸಭಾಪತಿಯವರು:–** ಸದನವನ್ನು 15 ನಿಮಿಷಗಳ ಕಾಲ ಮುಂದೂಡಲಾಗಿದೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(91) 16.07.2019 (12.50) LL/GR

**(ಅಪರಾಹ್ನ 12 ಗಂಟೆ 23 ನಿಮಿಷಕ್ಕೆ 15 ನಿಮಿಷಗಳ ಕಾಲ ಮುಂದೂಡಲ್ಪಟ್ಟಿದ್ದ ಸದನವು ಪುನಃ ಅಪರಾಹ್ನ 12 ಗಂಟೆ 57 ನಿಮಿಷಕ್ಕೆ ಸಮಾವೇಶಗೊಂಡಿತು)**

**(ಮಾನ್ಯ ಉಪ ಸಭಾಪತಿಯವರು ಪೀಠದಲ್ಲಿ ಉಪಸ್ಥಿತರಾದರು)**

**(ಈ ಹಂತದಲ್ಲಿ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಆಯನೂರು ಮಂಜುನಾಥ್‌ರವರನ್ನು ಹೊರತುಪಡಿಸಿ ಭಾರತೀಯ ಜನತಾ ಪಕ್ಷದ ಎಲ್ಲಾ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು)**

**(ಗೊಂದಲ)**

**(ಭಾರತೀಯ ಜನತಾ ಪಕ್ಷದ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು, ಭಿತ್ತಿ ಫಲಕಗಳನ್ನು ಪ್ರದರ್ಶಿಸುತ್ತಾ, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು)**

**(ಗೊಂದಲ)**

**ಉಪ ಸಭಾಪತಿಯವರು:-** ವಿರೋಧ ಪಕ್ಷದವರು ತಮ್ಮ ತಮ್ಮ ಸ್ಥಾನಗಳಿಗೆ ತೆರಳಿ, ಸದನ ನಡೆಸಲು ಅವಕಾಶ ಮಾಡಿಕೊಡಿ.

**(ಗೊಂದಲ)**

**ಡಾ॥ ಜಯಮಾಲ(ಸಭಾ ನಾಯಕರು):-** ಮಾನ್ಯ ಸಭಾಪತಿಯವರೇ, ತಾವು ವಿರೋಧ ಪಕ್ಷದವರಿಗೆ ಸದನ ನಡೆಸಲು ಅವಕಾಶ ನೀಡುವುದಕ್ಕೆ ತಿಳಿಸಬೇಕು.

**(ಗೊಂದಲ)**

**ಉಪ ಸಭಾಪತಿಯವರು:-** ವಿರೋಧ ಪಕ್ಷದ ನಾಯಕರು ತಮ್ಮ ಪಕ್ಷದ ಸದಸ್ಯರುಗಳನ್ನು ಸದನದ ಬಾವಿಯಿಂದ ಹೊರಗೆ ಬರಲು ಹೇಳಬೇಕು. ತಾವೆಲ್ಲರೂ ಸದನ ನಡೆಸುವುದಕ್ಕೆ ಅವಕಾಶ ಮಾಡಿಕೊಡಬೇಕು.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

## 2. ಸಭೆಯ ಮುಂದಿಡಲಾದ ಕಾಗದಪತ್ರಗಳು

**ಕಾರ್ಯದರ್ಶಿ, ಕ.ವಿ.ಪ.:-** ಮಾನ್ಯ ಸಭಾಪತಿಯವರೇ, ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುತ್ತಿದ್ದೇನೆ.

(ವಿಧೇಯಕಗಳ ಪಟ್ಟಿಯನ್ನು ಲಗತ್ತಿಸಲಾಗಿದೆ)

**ಉಪ ಸಭಾಪತಿಯವರು:-** ಮಂಡಿಸಲಾಯಿತು.

**(ಈ ಹಂತದಲ್ಲಿ ಭಾರತೀಯ ಜನತಾ ಪಕ್ಷದ ಸದಸ್ಯರುಗಳು, ಸರ್ಕಾರದ ವಿರುದ್ಧ ನಿರಂತರವಾಗಿ ಘೋಷಣೆಗಳನ್ನು ಕೂಗುತ್ತಿದ್ದರು)**

## 3. ವರದಿಗಳನ್ನೊಪ್ಪಿಸುವುದು

**ಅ) ಶ್ರೀ ಆಯನೂರು ಮಂಜುನಾಥ್(ಪದವೀಧರರ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ ಅಧ್ಯಕ್ಷನಾದ ನಾನು, ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆಯ 215 ರೀತ್ಯಾ, ಹಕ್ಕುಬಾಧ್ಯತಾ ಸಮಿತಿಯ 95ನೇ ವರದಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

**ಆ) ಶ್ರೀ ಕೆ.ಸಿ. ಕೊಂಡಯ್ಯ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ ಅಧ್ಯಕ್ಷನಾದ ನಾನು, ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆಯ 215 ರೀತ್ಯಾ, ಸರ್ಕಾರಿ ಭರವಸೆಗಳ ಸಮಿತಿಯ 47ನೇ ವರದಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

**ಉಪ ಸಭಾಪತಿಯವರು:-** ವರದಿಗಳನ್ನೊಪ್ಪಿಸಲಾಯಿತು.

**(ಈ ಹಂತದಲ್ಲಿ ಭಾರತೀಯ ಜನತಾ ಪಕ್ಷದ ಸದಸ್ಯರು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ನಿರಂತರವಾಗಿ ಘೋಷಣೆಗಳನ್ನು ಕೂಗುತ್ತಿದ್ದರು)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**4. ಪ್ರಶ್ನೋತ್ತರಗಳು**

**ಅ) ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಮೌಖಿಕವಾಗಿ ನೀಡಲಾದ ಉತ್ತರಗಳು**

**ಪ್ರಶ್ನೆ ಸಂಖ್ಯೆ: 259**

**(ಉತ್ತರವನ್ನು ಲಗತ್ತಿಸಲಾಗಿದೆ)**

**ಶ್ರೀ ಡಿ.ಕೆ.ಶಿವಕುಮಾರ್:-** ಮಾನ್ಯ ಸಭಾಪತಿಯವರೇ, ಟಿ.ನರಸೀಪುರದಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣ ಮಾಡುವುದಕ್ಕೆ ನಮ್ಮ ಸರ್ಕಾರದಿಂದ 10 ಲಕ್ಷ ರೂಪಾಯಿಗಳ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. ಆದರೆ, ಸದರಿ ಸಾಂಸ್ಕೃತಿಕ ಭವನ ನಿರ್ಮಾಣ ಮಾಡುವುದಕ್ಕೆ ಸ್ಥಳ ಲಭ್ಯವಿಲ್ಲದಿರುವುದರಿಂದ ಅದನ್ನು ನಿರ್ಮಾಣ ಮಾಡಿರುವುದಿಲ್ಲ. ಆದಾಗ್ಯೂ, ಸಾಂಸ್ಕೃತಿಕ ಭವನ ನಿರ್ಮಾಣ ಮಾಡಲು ಸರ್ಕಾರ ಪ್ರಯತ್ನ ಮಾಡುತ್ತದೆ.

**ಶ್ರೀ ಆರ್.ಧರ್ಮಸೇನ:-** ಮಾನ್ಯ ಸಭಾಪತಿಯವರೇ, ಟಿ.ನರಸೀಪುರದ ಗೋಪಾಲಪುರದಲ್ಲಿ ಪರಿಶಿಷ್ಟ ಜಾತಿಯವರು ಹೆಚ್ಚಿನ ಸಂಖ್ಯೆಯಲ್ಲಿರುತ್ತಾರೆ. ಆದುದರಿಂದ, ಸದರಿ ಸಾಂಸ್ಕೃತಿಕ ಭವನ ನಿರ್ಮಾಣ ಮಾಡಲು ಸ್ಥಳ ಗುರುತಿಸಿ, ಆದಷ್ಟು ಬೇಗ ಅನುದಾನ ಮಂಜೂರು ಮಾಡಬೇಕೆಂದು ತಮ್ಮ ಮೂಲಕ ಮಾನ್ಯ ಸಚಿವರನ್ನು ಕೋರುತ್ತೇನೆ.

**ಶ್ರೀ ಡಿ.ಕೆ.ಶಿವಕುಮಾರ್:-** ಮಾನ್ಯ ಸಭಾಪತಿಯವರೇ, ಆದಷ್ಟು ಬೇಗ ಹಣ ಮಂಜೂರು ಮಾಡುವುದಕ್ಕೆ ಕ್ರಮ ಕೈಗೊಳ್ಳುತ್ತೇವೆ.

(ಮುಂದುವರೆದಿದೆ...)

(92) 16.07.2019 1.00 ವೈಎಲ್-ಜಿಆರ್

**ಪ್ರಶ್ನೆ ಸಂಖ್ಯೆ 127**

**(ಉತ್ತರವನ್ನು ಲಗತ್ತಿಸಲಾಗಿದೆ)**

(ಗೊಂದಲ)

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ರಾಜಿನಾಮೆ ಕೊಟ್ಟಂತಹ ಮಂತ್ರಿಗಳೇ ಪ್ರಶ್ನೋತ್ತರದಲ್ಲಿ ಭಾಗಿಯಾಗುತ್ತಾರೆ. ಈ ಪ್ರಶ್ನೋತ್ತರ ಅವಧಿಯ

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ನಾಟಕಕ್ಕೆ ತಾವೂ ಸಾಕ್ಷಿಯಾಗುತ್ತೀರಿ. ಇದನ್ನು ಮುಂದುವರೆಸುವುದು ಸರಿಯಲ್ಲ. ದಯವಿಟ್ಟು ನಾವು ಹೇಳುವುದನ್ನೂ ಪೀಠ ಕೇಳಬೇಕಾಗುತ್ತದೆ. ಇದಕ್ಕೆ ಅವಕಾಶ ಮಾಡಿಕೊಡಬೇಡಿ. ಬಹುಮತ ಕಳೆದುಕೊಂಡಿರುವಂತಹ ಸರ್ಕಾರ, ಸದನದಲ್ಲಿ ನಾಟಕ ಮಾಡುತ್ತಿರುವ ಸರ್ಕಾರಕ್ಕೆ ತಾವು ಸಾಕ್ಷಿಯಾಗುತ್ತೀರಿ, ಇಷ್ಟು ಬೇಜವಾಬ್ದಾರಿತನದ ಕೆಲಸಕ್ಕೆ ತಾವು ಸಾಕ್ಷಿಯಾಗುತ್ತೀರಿ. ದಯವಿಟ್ಟು ಅದಕ್ಕೆ ತಾವು ಅವಕಾಶ ಮಾಡಿಕೊಡಬೇಡಿ.

(ಗೊಂದಲ)

**ಡಾ॥ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೇ, ಪ್ರಶ್ನೋತ್ತರ ಅವಧಿ ನಡೆಯುತ್ತಿರುವಂತಹ ಸಮಯದಲ್ಲಿ ವಿರೋಧ ಪಕ್ಷದ ಸದಸ್ಯರು ಈ ರೀತಿ ಬಾವಿಯಲ್ಲಿ ನಿಂತುಕೊಂಡು ಮಾತನಾಡುವುದು ಸರಿಯಲ್ಲ.

**ಶ್ರೀ ಬಸವರಾಜ ಪಾಟೀಲ್ ಇಟಗಿ:-** ಮಾನ್ಯ ಸಭಾಪತಿಯವರೇ, ಹೈದ್ರಾಬಾದ್-ಕರ್ನಾಟಕ ಭಾಗದಲ್ಲಿ ಒಂದು ಒಳ್ಳೆಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಇರಬೇಕೆನ್ನುವ ಉದ್ದೇಶದಿಂದ ಇದನ್ನು ಸ್ಥಾಪನೆ ಮಾಡಲಾಗಿರತಕ್ಕಂಥದ್ದು. ಆದರೆ, ರಾಯಚೂರು ಪಟ್ಟಣದಲ್ಲಿರುವ *Rajiv Gandhi Super Specialty Hospital (OPEC)* ಅನ್ನು RIMS (Raichur Institute of Medical Sciences) ನಿಂದ ಬೇರ್ಪಡಿಸಿ ಸ್ವಾಯತ್ತ ಸಂಸ್ಥೆಯನ್ನಾಗಿ ಪರಿವರ್ತಿಸಲು ಮಾನ್ಯ ಸಚಿವರಲ್ಲಿ ವಿನಂತಿಸುತ್ತೇನೆ. ಈಗಾಗಲೇ ಈ ಆಸ್ಪತ್ರೆಯನ್ನು 300 ಹಾಸಿಗೆಗಳ ಸಾಮರ್ಥ್ಯವುಳ್ಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವುದಕ್ಕೆ ಬೇಕಾಗಿರುವಂತಹ ಮಂಜೂರಾತಿ ನೀಡಲಾಗಿದ್ದು, ಅದನ್ನು ಬೇರ್ಪಡಿಸಿ ಸ್ವಾಯತ್ತ ಸಂಸ್ಥೆಯನ್ನಾಗಿ ಮಾಡಿದರೆ ಆ ಭಾಗದ ಜನರಿಗೆ ಹೆಚ್ಚು ಅನುಕೂಲವಾಗುತ್ತದೆ.

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರೆಲ್ಲರೂ ಸದನದ ಬಾವಿಯಲ್ಲಿ ನಿಂತು "ಮುಖ್ಯಮಂತ್ರಿಗಳು ರಾಜೀನಾಮೆ ನೀಡಬೇಕೆಂದು ಹೇಳುತ್ತಾ, ಸರ್ಕಾರಕ್ಕೆ ಧಿಕ್ಕಾರ, ಧಿಕ್ಕಾರ" ಎಂಬ ಘೋಷಣೆಗಳನ್ನು ಕೂಗುತ್ತಿದ್ದರು)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(ಗೊಂದಲ)

**ಶ್ರೀ ಈ.ತುಕಾರಾಮ್:-** ಮಾನ್ಯ ಸಭಾಪತಿಯವರೇ, *Rajiv Gandhi Super Specialty Hospital (OPEC)* ನ್ನು RIMS ನಿಂದ ಬೇರ್ಪಡಿಸಿ ಸ್ವಾಯತ್ತ ಸಂಸ್ಥೆಯನ್ನಾಗಿ

ಪರಿವರ್ತಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. ಆದರೆ, ಈಗಾಗಲೇ ಸದರಿ ಆಸ್ಪತ್ರೆಯನ್ನು 300 ಹಾಸಿಗೆಗಳ ಸಾಮರ್ಥ್ಯವುಳ್ಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವುದಕ್ಕೆ ಅನುಮೋದನೆಯಾಗಿದೆ. MCI ನಿಯಮಾವಳಿಗಳ ಪ್ರಕಾರವೇ ಮೇಲ್ದರ್ಜೆಗೇರಿಸಿ, PPP ಆಧಾರದ ಮೇಲೆ ಸದರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಅಪೋಲೋ ಆಸ್ಪತ್ರೆ ಮಾದರಿಯಲ್ಲಿ ಮಾಡಲು ತೀರ್ಮಾನಿಸಿದ್ದೇವೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೇ, ಈ ನಾಟಕಕ್ಕೆ ತಾವು ಅವಕಾಶ ಮಾಡಿಕೊಡಬೇಡಿ.

(ಗೊಂದಲ)

**ಪ್ರಶ್ನೆ ಸಂಖ್ಯೆ 149**

**(ಉತ್ತರವನ್ನು ಲಗತ್ತಿಸಲಾಗಿದೆ)**

**ಶ್ರೀ ಕೆ.ಸಿ.ಕೊಂಡಯ್ಯ:-** ಮಾನ್ಯ ಸಭಾಪತಿಯವರೇ, ತಮಗೆ ತಿಳಿದಿರುವ ಹಾಗೆ ತುಂಗಭದ್ರಾ ಜಲಾಶಯವನ್ನು ಸುಮಾರು 60 ವರ್ಷಗಳ ಹಿಂದೆ ನಿರ್ಮಿಸಲಾಗಿದೆ. ಇವತ್ತು ತುಂಗಭದ್ರಾ ಜಲಾಶಯದಲ್ಲಿ ಹೂಳು ತುಂಬಿಕೊಂಡು 33 ಟಿಎಂಸಿ ನೀರು ಕಡಿಮೆಯಾಗಿದೆ. ಆದರೆ, ಮಳೆಗಾಲದಲ್ಲಿ flood ಬಂದು ಸುಮಾರು 250 ರಿಂದ 300 ಟಿಎಂಸಿ ನೀರು ನದಿಗೆ ಹರಿಯುತ್ತಿದೆ. ಅದಕ್ಕಾಗಿ ಸರ್ಕಾರಕ್ಕೆ ಒತ್ತಾಯ ಮಾಡುವುದೇನೆಂದರೆ, ಇವತ್ತಿನ ದಿವಸ ಪರ್ಯಾಯ ವ್ಯವಸ್ಥೆಯನ್ನು ಮಾಡಲಾಗಿದ್ದು, ಮಾನ್ಯ ಸಚಿವರು ಒಪ್ಪಿಗೆಯನ್ನು ನೀಡಿದ್ದು, ಸುಮಾರು ರೂ.6000 ಕೋಟಿಗಳಿಗೆ DPR (Detailed Project Report) ಅನ್ನು 2015-16ನೇ ಸಾಲಿನ ಜಲ ಸಂಪನ್ಮೂಲ ದರ ಪಟ್ಟಿಯ ಅನ್ವಯ ಮಾಡಲಾಗಿದೆ ಎಂದು ಲಿಖಿತ ಉತ್ತರದಲ್ಲಿ ಸಚಿವರು ತಿಳಿಸಿದ್ದಾರೆ. ಇದನ್ನು ಆದಷ್ಟು ಬೇಗನೆ ಕೈಗೆತ್ತಿಕೊಂಡು ಅನುಷ್ಠಾನಗೊಳಿಸಬೇಕೆಂದು ಕೇಳಿಕೊಳ್ಳುತ್ತೇನೆ. ಏಕೆಂದರೆ ತುಂಗಭದ್ರಾ ಜಲಾಶಯ ನಿರ್ಮಾಣದ ಹಂತದಲ್ಲಿ 1945 ರಿಂದ 1953 ರವರೆಗೆ ನಿಜಾಮರ ಆಡಳಿತ ಮತ್ತು ಮದ್ರಾಸ್ ಸರ್ಕಾರ ಕಾರ್ಯನಿರ್ವಹಿಸಿದೆ.

(ಗೊಂದಲ)

"ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಡಿ.ಕೆ.ಶಿವಕುಮಾರ್:-** ಮಾನ್ಯ ಸಭಾಪತಿಯವರೇ, ನಮ್ಮ ಸರ್ಕಾರ ನವಳಿ ಗ್ರಾಮದ ಹತ್ತಿರ ಸಮಾನಾಂತರ ಜಲಾಶಯವನ್ನು ನಿರ್ಮಿಸುವುದು ಈ ಸರ್ಕಾರದ ಬದ್ಧತೆಯಾಗಿದೆ. ಈಗಾಗಲೇ ಪಕ್ಕದ ರಾಜ್ಯಗಳಾದ ಆಂಧ್ರ ಪ್ರದೇಶ ಸರ್ಕಾರ ಹಾಗೂ ತೆಲಂಗಾಣ ಸರ್ಕಾರಗಳ ಸಲಹೆ ಮತ್ತು ಅಭಿಪ್ರಾಯಗಳನ್ನು ಸೂಚಿಸಲು ಮನವಿ ಮಾಡಿಕೊಂಡಿದ್ದೇವೆ. **(ಗೊಂದಲ)** ನಮ್ಮ ರಾಜ್ಯಕ್ಕೆ 33 ಟಿಎಂಸಿ ನೀರಿನ ಯೋಜನೆ ವಿಶೇಷವಾದಂತಹ ಒಂದು ಪ್ಯಾಕೇಜ್. ಈಗ ಮಾನ್ಯ ಸದಸ್ಯರು ಏನು ಕೇಳುತ್ತಿದ್ದಾರೆ ಅದರ ಪ್ರಕಾರ ನವಳಿ ಗ್ರಾಮದ ಹತ್ತಿರ ಸಮಾನಾಂತರ ಜಲಾಶಯವನ್ನು ನಿರ್ಮಿಸುವುದು ಈ ಸರ್ಕಾರದ ಬದ್ಧತೆಯಾಗಿದ್ದು, ಅದನ್ನು ಮಾಡಲು ಎಲ್ಲಾ ರೀತಿಯ ಕ್ರಮಗಳನ್ನ ಕೈಗೊಳ್ಳುತ್ತಿದ್ದೇವೆ.

**ಆ) <u>ಚುಕ್ಕೆ ಗುರುತಿನ ಮತ್ತು ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು</u>**

**ಡಾ॥ ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೇ,

ಅ) ದಿನಾಂಕ 15ನೇ ಜುಲೈ 2019ರ ಸಮೂಹ-1ರಲ್ಲಿನ ಸದನದಲ್ಲಿ ಉತ್ತರಿಸುವ ಚುಕ್ಕೆ ಗುರುತಿನ 15 ಪ್ರಶ್ನೆಗಳ ಪೈಕಿ 14 ಪ್ರಶ್ನೆಗಳಿಗೆ ಹಾಗೂ ಚುಕ್ಕೆ ಗುರುತಿಲ್ಲದ 69 ಪ್ರಶ್ನೆಗಳ ಪೈಕಿ 62 ಪ್ರಶ್ನೆಗಳಿಗೆ ಲಿಖಿತ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

**ಮತ್ತು**

ಆ) ದಿನಾಂಕ 16ನೇ ಜುಲೈ 2019ರ ಸಮೂಹ-IIರಲ್ಲಿನ ಸದನದಲ್ಲಿ ಉತ್ತರಿಸುವ ಚುಕ್ಕೆ ಗುರುತಿನ 15 ಪ್ರಶ್ನೆಗಳ ಪೈಕಿ ಮೌಖಿಕವಾಗಿ ಉತ್ತರಿಸಲಾಗದ 10 ಪ್ರಶ್ನೆಗಳಿಗೆ ಹಾಗೂ ಚುಕ್ಕೆ ಗುರುತಿಲ್ಲದ 137 ಪ್ರಶ್ನೆಗಳ ಪೈಕಿ 47 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

**ಸಭಾಪತಿಯವರು:-** ಈಗ ಸದನವನ್ನು ದಿನಾಂಕ 18.07.2019 ರಂದು ಬೆಳಿಗ್ಗೆ 11:30 ಗಂಟೆಯವರೆಗೆ ಮುಂದೂಡಲಾಗಿದೆ.

**(ಸದನವು ಮಧ್ಯಾಹ್ನ 1 ಗಂಟೆ 04 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ 18ನೇ ಜುಲೈ ಮಾಹೆ 2019ರ ಗುರುವಾರದಂದು ಬೆಳಿಗ್ಗೆ 11 ಗಂಟೆ 30 ನಿಮಿಷಕ್ಕೆ ಸಮಾವೇಶಗೊಳ್ಳಲು ನಿಶ್ಚಯಿಸಿತು)**

"ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"